ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿರುವುದು

540 (865) ಶ್ರೀ ನಾರಾಯಣಸ್ವಾಮಿ ಎಂ. (ಬಂಗಾರಪೇಟೆ):– ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕೋಲಾರ ಜಿಲ್ಲೆಯನ್ನು ಬರಗಾಲ ಪೀಡಿತ ಜಿಲ್ಲೆಯೆಂದು ಘೋಷಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಜಿಲ್ಲೆಯ ಯಾವ ಯಾವ ತಾಲ್ಲೂಕುಗಳನ್ನು ಬರಗಾಲ ಪೀಡಿತ ಪ್ರದೇಶೆಂದು ಘೋಷಣೆ ಮಾಡಲಾಗಿದೆ (ವಿವರಗಳನ್ನು ನೀಡುವುದು) ;

ಇ) ಈ ಬರಗಾಲ ಪೀಡಿತ ಪ್ರದೇಶಗಳ ಅಭಿವೃದ್ಧಿಗೆ ಸರ್ಕಾರ ಮಂಜೂರು ಮಾಡಿದ ಪರಿಹಾರದ ಹಣವೆಷ್ಟು (ವಿವರಗಳನ್ನು ನೀಡುವುದು) ;

ಈ) ಪರಿಹಾರ ಮಂಜೂರು ಮಾಡದೇ ಇದ್ದಲ್ಲಿ ಯಾವ ರೂಪದಲ್ಲಿ ಪರಿಹಾರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು (ವಿವರಗಳನ್ನು ನೀಡುವುದು) ?

ಶ್ರೀ ಡಿ. ವಿ. ಸದಾನಂದಗೌಡ (ಮಾನ್ಯ ಮುಖ್ಯಮಂತ್ರಿಗಳು):–

ಅ) ಬಂದಿದೆ.

ಆ) ಕೋಲಾರ ಜಿಲ್ಲೆ (1) ಕೋಲಾರ (2) ಬಂಗಾರಪೇಟೆ (3) ಶ್ರೀನಿವಾಸಪುರ ಹಾಗೂ (4) ಮುಳಬಾಗಿಲು ತಾಲ್ಲೂಕುಗಳನ್ನು ಸರ್ಕಾರವು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿರುತ್ತದೆ.

ಇ) ಜಿಲ್ಲೆಯ ಬರಪೀಡಿತ ತಾಲ್ಲೂಕುಗಳಲ್ಲಿ ಪರಿಹಾರ ಕಾರ್ಯಗಳನ್ನು ಕೈಗೊಳ್ಳಲು ಸರ್ಕಾರವು ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ಜಿಲ್ಲೆಗೆ ರೂ. 650.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಈ) ಉದ್ಭವಿಸುವುದಿಲ್ಲ.

ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

541 (866) ಶ್ರೀ ನಾರಾಯಣಸ್ವಾಮಿ ಎಂ. (ಬಂಗಾರಪೇಟೆ):– ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–